# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.49, ಲಿಂಗರಾಜಪುರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಲಿಂಗರಾಜಪುರ ವಾರ್ಡ್ ಕಛೇರಿಯ ಕಟ್ಟಡದಲ್ಲಿ ದಿನಾಂಕ: 08-11-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1) ಶ್ರೀ ಅಜ್ಮಲ್ ಆರೀಫ್, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2) ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3) ಶ್ರೀ ವೆಂಕಟೇಶ್, ವೈದ್ಯಾಧಿಕಾರಿಗಳು, ಲಿಂಗರಾಜಪುರ
4) ಶ್ರೀ ಕಿರೀಟಪ್ಪ, ಅಧ್ಯಕ್ಷರು, ಲಿಂಗರಾಜಪುರ ಕ್ಷೇಮಾಭಿವೃದ್ಧಿ ಸಂಘ,
5) ಶ್ರೀ ಜಯಶೀಲನ್, ಸ್ಥಳೀಯರು, ಲಿಂಗರಾಜಪುರ,
6) ಶ್ರೀ ಉಮೇಶ್.ಆರ್, ಸ್ಥಳೀಯರು, ಲಿಂಗರಾಜಪುರ,
7) ಶ್ರೀಮತಿ ಸುಮಿತ್ರಾ, ಸ್ಥಳೀಯರು, ಲಿಂಗರಾಜಪುರ,

**ಹಾಜರಿದ್ದ ಅಧಿಕಾರಿಗಳು**

1) ಶ್ರೀ ವಿಜಯ್, ಕಿರಿಯ ಆರೋಗ್ಯ ನಿರೀಕ್ಷಕರು.
2) ಕು॥ ರಜನಿ, ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು
3) ಕು॥ ಪೂಜಾ.ಎಂ, ಸಹಾಯಕ ಅಭಿಯಂತರರು, ಲಿಂಗರಾಜಪುರ

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) **ಘನತ್ಯಾಜ್ಯ ನಿರ್ವಹಣೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

2) **ಬೀದಿ ದೀಪಗಳ ನಿರ್ವಹಣೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

3) **ಬೃಹತ್ ನೀರುಗಾಲುವೆ:-**

- **ಶ್ರೀ ಜಯಶೀಲನ್, ಸ್ಥಳೀಯರು, ಲಿಂಗರಾಜಪುರ ರವರು ಮಾತನಾಡಿ** ಕೆ.ಎಸ್.ಎಫ್.ಸಿ ಬಡಾವಣೆ ಸ್ಮಶಾಣದ ಹತ್ತಿರ ರಾಜಕಾಲುವೆ ತುಂಬಿ ಹರಿಯುತ್ತಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಚರ್ಚಿಸಿ, ಮಾನ್ಯ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆಗೆ ರಾಜಕಾಲುವೆಗಳ ವಿಭಾಗದ ಅಭಿಯಂತರರನ್ನು ಆಹ್ವಾನಿಸಿ, ಕ್ರಮ ವಹಿಸಲು ಸೂಚಿಸಿದರು.

4) **ಆರೋಗ್ಯ ಇಲಾಖೆ:-**

- **ಶ್ರೀ ವೆಂಕಟೇಶ ಆರೋಗ್ಯಾಧಿಕಾರಿ ರವರು ಮಾತನಾಡಿ,** ಪ್ರಸ್ತುತ ಲಿಂಗರಾಜಪುರ ವಾರ್ಡ್ ಆರೋಗ್ಯ ಕೇಂದ್ರದಲ್ಲಿ ವ್ಯಾಕ್ಸಿನೇಷನ್ ಅನ್ನು ನಿಲ್ಲಿಸಲಾಗಿದ್ದು, ವಾರಕ್ಕೊಮ್ಮೆ ಮಾತ್ರ ವ್ಯಾಕ್ಸಿನೇಷನ್ ಅನ್ನು ನೀಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸುತ್ತಾ, ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿದಾರರಿಗೆ ಸರ್ಕಾರದ ವತಿಯಿಂದ ಕೋ ಬ್ರಾಂಡೆಡ್ ಕಾರ್ಡ್‌ನ್ನು ನೀಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

5) **ಕಾಮಗಾರಿ ಇಲಾಖೆ:-**

- **ಮಿಸೆಸ್ ಥಾಮಸ್ ರವರು ಮಾತನಾಡಿ** ಅವರ ಮನೆಯ ಪಕ್ಕದಲ್ಲಿರುವ ಖಾಲಿ ನಿವೇಶನದಲ್ಲಿ ಗಿಡಮರಗಳು ಬೆಳೆದಿದ್ದು, ಇದರಿಂದ ತುಂಬಾ ತೊಂದರೆಯಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಖಾಲಿ ನಿವೇಶನ ಮಾಲೀಕರಿಗೆ ಸ್ವಚ್ಛಗೊಳಿಸಲು ತಿಳಿಸಲು ಆರೋಗ್ಯ ನಿರೀಕ್ಷಕರಿಗೆ ಆದೇಶಿಸಿದರು.
- ಶ್ರೀಮತಿ ಸುಮಿತ್ರಾ, ಸ್ಥಳೀಯರು, ಲಿಂಗರಾಜಪುರ, ರವರು ಮಾತನಾಡಿ, ಲಿಂಗರಾಜಪುರದ ನಕ್ಷತ್ರ ಅಪಾರ್ಟ್‌ಮೆಂಟ್ ಹಿಂಭಾಗ ಚರಂಡಿಯಲ್ಲಿ ಹೂಳು ತೆಗೆಯಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಅಭಿಯಂತರರು ಮಾತನಾಡಿ, ಈಗಾಗಲೇ ಹೂಳು ತೆಗೆಯುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಆದ್ಯತೆ ಮೇರೆಗೆ ಹೂಳನ್ನು ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.

6) **ಕಂದಾಯ ಇಲಾಖೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

7) **ಉದ್ಯಾನವನಗಳ ವಿಭಾಗ:-** ಯಾವುದೇ ಸಮಸ್ಯೆ ಇರುವುದಿಲ್ಲ.

8) **ಅರಣ್ಯ ವಿಭಾಗ:-**

- **ಶ್ರೀ ಜಯಶೀಲನ್, ಸ್ಥಳೀಯರು, ಲಿಂಗರಾಜಪುರ ರವರು ಮಾತನಾಡಿ** ದೀಪಾ ಬೇಕರಿ ಹತ್ತಿರ ಮರದ ಕೊಂಬೆಗಳನ್ನು ಕತ್ತರಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆಗೆ ಅರಣ್ಯ ವಿಭಾಗದವರನ್ನು ಆಹ್ವಾನಿಸಿ, ಕೂಡಲೇ ಕ್ರಮ ವಹಿಸಲು ಆದೇಶಿಸಿದರು.

9) **ಪಶುಸಂಗೋಪನೆ ವಿಭಾಗ:-** ಯಾವುದೇ ಸಮಸ್ಯೆ ಇರುವುದಿಲ್ಲ.

10) **ನೀರು ಸರಬರಾಜು:-** ಯಾವುದೇ ಸಮಸ್ಯೆ ಇರುವುದಿಲ್ಲ.

11) **ಪೊಲೀಸ್/ಸಂಚಾರ ಮತ್ತು ಕಾನೂನು ಸುವ್ಯವಸ್ಥೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

12) **ಬೆಸ್ಕಾಂ ಇಲಾಖೆ :-** ಯಾವುದೇ ಸಮಸ್ಯೆ ಇರುವುದಿಲ್ಲ.

ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳನ್ನು ಕೂಡಲೇ ಅನುಷ್ಠಾನಕ್ಕೆ ತರಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.49, ಲಿಂಗರಾಜಪುರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.49, ಲಿಂಗರಾಜಪುರ

**<u>ಪ್ರತಿಯನ್ನು</u>**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.